All India Radio: Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

02.09.2026 2.30 p.m.

<><><><>

ಮುಖ್ಯಾಂಶಗಳು

- ಮೇಕದಾಟು ಯೋಜನೆಗೆ ಶೀಘ್ರವೇ ತಾಂತ್ರಿಕ ಅನುಮೋದನೆ ನೀಡುವಂತೆ ಕೇಂದ್ರ ಜಲ ಆಯೋಗಕ್ಕೆ ಸಚಿವ ಚೆಲುವರಾಯಸ್ವಾಮಿ ಮನವಿ
- ಮೈಸೂರು-ಚಾಮರಾಜನಗರ ಜಿಲ್ಲೆಯ ವಿವಿಧೆಡೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಬರ ಪರಿಶೀಲನೆ
- ಇದೇ ಭಾನುವಾರ ಬೆಂಗಳೂರಿನಲ್ಲಿ 'ಸ್ಟಡಿ ಅಬ್ರಾಡ್ ಮೇಳ' – ವಿಶ್ವದ ೭೦ ವಿಶ್ವವಿದ್ಯಾಲಯಗಳ ಪ್ರತಿನಿಧಿಗಳು ಭಾಗಿ
- ಮುಂದುವರಿದ ಬಿಜೆಪಿ ಬಳ್ಳಾರಿ ಚಲೋ ಪಾದಯಾತ್ರೆ ; ಸರ್ಕಾರದ ವಿರುದ್ಧ ಬಿ.ವೈ.ವಿಜಯೇಂದ್ರ ಅಸಮಾಧಾನ

<><><><>

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಮೇಕೆದಾಟು ಜಲಾಶಯ ಯೋಜನೆಗೆ ಅಗತ್ಯವಿರುವ ಶಾಸನಬದ್ಧ ತಾಂತ್ರಿಕ ಅನುಮೋದನೆಗಳನ್ನು ಶೀಘ್ರವೇ ನೀಡುವಂತೆ ಜಲಸಂಪನ್ಮೂಲ ಸಚಿವ ಎಸ್.ಚಲುವರಾಯಸ್ವಾಮಿ ಕೇಂದ್ರ ಜಲ ಆಯೋಗದ ಅಧ್ಯಕ್ಷ ಅನುಪಮ್ ಪ್ರಸಾದ್ ಅವರಿಗೆ ಮನವಿ ಮಾಡಿದ್ದಾರೆ. ನವದೆಹಲಿಯಲ್ಲಿಂದು ನಡೆದ ಸಭೆಯಲ್ಲಿ ಮೇಕೆದಾಟು ಯೋಜನೆಯ ಸಮಗ್ರ ಯೋಜನಾ ವರದಿ ಕುರಿತು ಚರ್ಚೆ ನಡೆಯಿತು. ಯೋಜನೆಗೆ ಸಂಬಂಧಿಸಿದ ಸ್ಥಳೀಯ ವಾಸ್ತವಾಂಶಗಳು ಮತ್ತು ತಾಂತ್ರಿಕ ವಿಚಾರಗಳ ಕುರಿತು ಆಯೋಗದ ಅಧ್ಯಕ್ಷರಿಗೆ ಅವರು ಸ್ಪಷ್ಟನೆ ನೀಡಿದ್ದಾರೆ. ಅಗತ್ಯವಿರುವ ಹೆಚ್ಚುವರಿ ತಾಂತ್ರಿಕ ಮಾಹಿತಿಯನ್ನು ತ್ವರಿತವಾಗಿ ಒದಗಿಸಲಾಗುವುದು ಎಂದು ತಿಳಿಸಿದ್ದಾರೆ. ಪ್ರಸ್ತುತ ಹವಾಮಾನ ವೈಪರಿತ್ಯ, ಮಳೆಕೊರತೆ ಹಾಗೂ ನೀರಿನ ಸಂಕಷ್ಟದ ಹಿನ್ನೆಲೆಯಲ್ಲಿ ಮೇಕೆದಾಟು ಯೋಜನೆಯ ಅಗತ್ಯತೆಯನ್ನು ಸಚಿವರು ಪ್ರತಿಪಾದಿಸಿದ್ದಾರೆ. ಯೋಜನೆಯಿಂದ ಬೆಂಗಳೂರು ನಗರ ಸೇರಿದಂತೆ ಸುತ್ತಮುತ್ತಲಿನ ಜಿಲ್ಲೆಗಳ ಕುಡಿಯುವ ನೀರಿನ ಅಗತ್ಯ ಪೂರೈಸಲು ನೆರವಾಗಲಿದೆ. ಜೊತೆಗೆ ಜಲವಿದ್ಯುತ್ ಉತ್ಪಾದನೆಗೂ ಅವಕಾಶ ದೊರೆಯಲಿದೆ ಎಂದು ವಿವರಿಸಿದ್ದಾರೆ. ಈ ಯೋಜನೆ ಜಾರಿಯಿಂದ ಕರ್ನಾಟಕ ಹಾಗೂ

ತಮಿಳುನಾಡಿಗೂ ಪ್ರಯೋಜನಕಾರಿಯಾಗಲಿದ್ದು, ತಾಂತ್ರಿಕ ಪರಿಶೀಲನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ ಅನುಮೋದನೆ ನೀಡಬೇಕು ಎಂದು ಮನವಿ ಮಾಡಿದ್ದಾರೆ.

<><><><>

ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನಲ್ಲಿ ಇಂದು ಕಂದಾಯ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಬರ ಪರಿಶೀಲನೆ ನಡೆಸಿದರು. ಗಟ್ಟವಾಡಿ ಗ್ರಾಮದಲ್ಲಿ ಬೆಳೆ ಹಾನಿಗೊಳಗಾದ ರೈತರ ಜಮೀನಿಗೆ ತೆರಳಿ ಬರ ವೀಕ್ಷಣೆ ನಡೆಸಿದರು. ಸಾಲ ಮಾಡಿ ಬೆಳೆ ಬೆಳೆದು ಸಂಕಷ್ಟಕ್ಕೊಳಗಾಗಿರುವ ರೈತರು ಹಾಗೂ ಅಧಿಕಾರಿಗಳಿಂದ ಮಾಹಿತಿ ಪಡೆದ ಉಪಮುಖ್ಯಮಂತ್ರಿ ಶೀಘ್ರವೇ ಬರ ಪರಿಹಾರ ಒದಗಿಸುವುದಾಗಿ ರೈತರಿಗೆ ಭರವಸೆ ನೀಡಿದರು. ಬಳಿಕ ಅವರು, ಚಾಮರಾಜನಗರ ಜಿಲ್ಲೆಯ ವಿವಿಧೆಡೆ ಬರ ಅಧ್ಯಯನ ನಡೆಸಿದರು. ಈಗಾಗಲೇ ಜಿಲ್ಲೆಯ ೫ ತಾಲೂಕುಗಳನ್ನು ಬರ ಪೀಡಿತ ತಾಲೂಕುಗಳೆಂದು ಘೋಷಿಸಲಾಗಿದೆ. ಈ ನಡುವೆ ಇಂದು ಗುಂಡ್ಲುಪೇಟೆ ತಾಲೂಕಿನ ಸೋಮಹಳ್ಳಿಯಲ್ಲಿ ಸಂಪೂರ್ಣವಾಗಿ ನಾಶವಾಗಿರುವ ಸೂರ್ಯಕಾಂತಿ ಬೆಳೆಯನ್ನು ಕಂದಾಯ ಸಚಿವರು ಪರಿಶೀಲನೆ ನಡೆಸಿದರು. ಬಳಿಕ ಅವರು, ಮರಳಾಪುರ, ಸೀಗೆವಾಡಿ, ರಂಗನಾಥಪುರ ಗ್ರಾಮಗಳಲ್ಲೂ ಬೆಳೆ ಹಾನಿ ವೀಕ್ಷಣೆ ಮಾಡಿದರು. ಸಚಿವರು ಸಂಜೆವರೆಗೂ ಬರ ಅಧ್ಯಯನ ನಡೆಸಲಿದ್ದು ಸಂಜೆ ಹನೂರಿನಲ್ಲಿ ಬರ ನಿರ್ವಹಣೆ ಸಂಬಂಧ ಅಧಿಕಾರಿಗಳ ಸಭೆ ನಡೆಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಸಿ.ಪುಟ್ಟರಂಗಶೆಟ್ಟಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><><><>

ಬೆಂಗಳೂರಿನಲ್ಲಿ ಇದೇ ೬ ರಂದು 'ಸ್ಟಡಿ ಅಬ್ರಾಡ್' ಮೇಳ ನಡೆಯಲಿದೆ ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಗತ್ತಿನ ಪ್ರಮುಖ ೭೦ ಅತ್ಯುತ್ತಮ ವಿಶ್ವವಿದ್ಯಾಲಯಗಳ ಪ್ರತಿನಿಧಿಗಳು ಮೇಳದಲ್ಲಿ ಭಾಗವಹಿಸಲಿದ್ದು, ಕೋರ್ಸ್‌ಗಳು, ಶುಲ್ಕ ಮತ್ತು ಸ್ಕಾಲರ್‌ಶಿಪ್ ಮಾಹಿತಿ ನೀಡಲಿದ್ದಾರೆ ಎಂದರು. ಇದೇ ವೇಳೆ ಆಹಾರ ಸುರಕ್ಷತೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಬೆಂಗಳೂರು, ಮಂಗಳೂರು, ಹುಬ್ಬಳ್ಳಿ, ಮೈಸೂರು, ಬೆಳಗಾವಿ ಜಿಲ್ಲೆಗಳಲ್ಲಿ ಆಹಾರ ಮಳಿಗೆಗಳ ತಪಾಸಣೆ ಚುರುಕುಗೊಳಿಸಲಾಗಿದೆ. ಕಳಪೆ ಸಿಹಿತಿಂಡಿ ಘಟಕಗಳನ್ನು ಬಂದ್ ಮಾಡಲಾಗಿದ್ದು, ಕೆಎಫ್‌ಸಿ ಹಾಗೂ ಕೃತಕವಾಗಿ ಹಣ್ಣು ಮಾಡುವ ಘಟಕಗಳಿಂದ ಸ್ಯಾಂಪಲ್ ಸಂಗ್ರಹಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಚಿಕ್ಕಬಳ್ಳಾಪುರ ಜಿಲ್ಲೆಯ ಪ್ರಮುಖ ತೋಟಗಾರಿಕಾ ಬೆಳೆಯಾದ ದಾಳಿಂಬೆಯ ಬೆಲೆ ತೀವ್ರವಾಗಿ ಕುಸಿತ ಕಂಡಿದೆ. ಇದರಿಂದ ಜಿಲ್ಲೆಯ ದಾಳಿಂಬೆ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬೆಲೆ ಕುಸಿತದ ಸಂಕಷ್ಟಕ್ಕೆ ಒಳಗಾಗಿರುವ ರೈತರ ನೆರವಿಗೆ ಧಾವಿಸಲು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಜಿಲ್ಲೆಯ ೨ ಸಾವಿರದ ೫೦೦ ಹೆಕ್ಟೇರ್ ಪ್ರದೇಶದಲ್ಲಿ ದಾಳಿಂಬೆ ಬೆಳೆ ಬೆಳೆಯಲಾಗುತ್ತಿದ್ದು, ಈ ಬಾರಿ ಉತ್ತಮ ಬೆಳೆ ಮತ್ತು ಇಳುವರಿ ಬಂದಿದ್ದರೂ ಮಾರುಕಟ್ಟೆಯಲ್ಲಿ ಉಂಟಾಗಿರುವ ದಿಢೀರ್ ಬೆಲೆ ಕುಸಿತವ ರೈತರ ಆದಾಯದ ಮೇಲೆ ಗಂಭೀರ ಪರಿಣಾಮ ಬೀರಿ ಸಂಕಷ್ಟಕ್ಕೆ ಸಿಲುಕಿಸಿದೆ. ಮಾರುಕಟ್ಟೆ ಪರಿಸ್ಥಿತಿ ಸುಧಾರಿಸುವವರೆಗೆ ಉತ್ಪನ್ನವನ್ನು ಸಂಗ್ರಹಿಸಿಟ್ಟುಕೊಳ್ಳುವ ಅವಕಾಶ ಸೀಮಿತವಾಗಿದೆ. ಹೀಗಾಗಿ ತಕ್ಷಣ ಮಾರುಕಟ್ಟೆ ಮಧ್ಯಸ್ಥಿಕೆ ಅತ್ಯಗತ್ಯವಾಗಿದೆ ಎಂದು ಕೇಂದ್ರ ಕೃಷಿ ಹಾಗೂ ರೈತರ ಕಲ್ಯಾಣ ಸಚಿವರ ಗಮನಕ್ಕೆ ತರಲಾಗಿದೆ ಎಂದು ಡಾ.ಕೆ.ಸುಧಾಕರ್ ತಿಳಿಸಿದ್ದಾರೆ.

<><><>

ಬಿಜೆಪಿಯ ಬಳ್ಳಾರಿ ಚಲೋ ಪ್ರತಿಭಟನಾ ಮೆರವಣಿಗೆ ೨ನೇ ದಿನಕ್ಕೆ ಕಾಲಿಟ್ಟಿದೆ. ಇಂದು ಪಾದಯಾತ್ರೆ ರಾಯಚೂರು ಜಿಲ್ಲೆಯ ಮಸ್ಕಿಯ ಸಂತೆ ಕೆಲ್ಲೂರಿನಿಂದ ಆರಂಭವಾಗಿದೆ. ಪಾದಯಾತ್ರೆಯಲ್ಲಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಸಚಿವರಾದ ಶ್ರೀರಾಮುಲು, ಗಾಲಿ ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಸೇರಿದಂತೆ ಹಲವು ನಾಯಕರು ಪಾಲ್ಗೊಂಡಿದ್ದಾರೆ. ಈ ವೇಳೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದಿದೆ ಎಂದು ದೂರಿದ್ದಾರೆ. ಪರಿಶಿಷ್ಟರ ಅನುದಾನ ದುರ್ಬಳಕೆ, ವಾಲ್ಮೀಕಿ ನಿಗಮದ ಅವ್ಯವಹಾರ ಹಾಗೂ ರಾಜ್ಯ ಸರ್ಕಾರದ ವಿವಿಧ ಆಡಳಿತ ವೈಫಲ್ಯಗಳನ್ನು ಮುಂದಿಟ್ಟುಕೊಂಡು ಬಿಜೆಪಿ ನಾಯಕರು ಇದೇ ೧೦ವರೆಗೆ ಪಾದಯಾತ್ರೆ ಹಮ್ಮಿಕೊಂಡಿದ್ದು, ಬಳ್ಳಾರಿಯಲ್ಲಿ ಪಾದಯಾತ್ರೆ ಸಮಾರೋಪಗೊಳ್ಳಲಿದೆ.

<><><>

ಬೆಂಗಳೂರು ದಕ್ಷಿಣ ನಗರಪಾಲಿಕೆ ವ್ಯಾಪ್ತಿಯ ಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಸತೀಶ್ ರೆಡ್ಡಿ, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಹಾಗೂ ಪಾಲಿಕೆ ಆಯುಕ್ತ ಕೆ.ಎನ್.ರಮೇಶ್ ಇಂದು ಬೆಳಗ್ಗೆ ಎಚ್‌ಎಸ್‌ಆರ್ ಲೇಔಟ್‌ನ ಸ್ಥಳೀಯ ನಿವಾಸಿಗಳ ಕುಂದುಕೊರತೆಗಳನ್ನು ಖುದ್ದಾಗಿ ಆಲಿಸಿದರು. ಅರಕೆರೆ ವಾರ್ಡ್ ವ್ಯಾಪ್ತಿಯಲ್ಲಿರುವ ಸುಮಾರು

೨೦೦ ಕೋಟಿಗೂ ಅಧಿಕ ಮೌಲ್ಯದ ಸಿಎ ನಿವೇಶನಗಳು ಅಕ್ರಮವಾಗಿ ಒತ್ತುವರಿಯಾಗುತ್ತಿರುವುದನ್ನು ತಡೆಯಲು ತಂತಿ ಬೇಲಿ ಅಳವಡಿಸಬೇಕೆಂದು ಸಾರ್ವಜನಿಕರು ಆಯುಕ್ತರಲ್ಲಿ ಮನವಿ ಮಾಡಿದರು. ಇದೇ ವೇಳೆ ತಳಮಹಡಿಯನ್ನು ಅನಧಿಕೃತವಾಗಿ ವಾಣಿಜ್ಯ ಬಳಕೆಗೆ ಉಪಯೋಗಿಸುತ್ತಿರುವ ಅಂಗಡಿಗಳಿಗೆ ನೋಟಿಸ್ ನೀಡಿ ಬಂದ್ ಮಾಡುವಂತೆ ಮುಖ್ಯ ಆಯುಕ್ತರು ಸೂಚನೆ ನೀಡಿದ್ದಾರೆ.

<><><><>

ಇದೇ ೫ ರಂದು ವಿಜಯನಗರ ಜಿಲ್ಲೆಯಲ್ಲಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಜಾಸೇವಾ ಅಭಿಯಾನಕ್ಕೆ ಚಾಲನೆ ದೊರೆಯಲಿದೆ. ಸಾರ್ವಜನಿಕರ ಕುಂದು ಕೊರತೆಗಳನ್ನು ಆಲಿಸಿ, ಸ್ಥಳದಲ್ಲೇ ಅಥವಾ ನಿಗದಿತ ಕಾಲಮಿತಿಯಲ್ಲಿ ಪರಿಹರಿಸುವ ರಾಜ್ಯ ಸರ್ಕಾರದ 'ಪ್ರಜಾಸೇವಾ ಅಭಿಯಾನ'ದ ಸಭೆ ಅಂದು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿಯಲ್ಲಿ ನಡೆಯಲಿವೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ತಿಳಿಸಿದ್ದಾರೆ. ಸಾರ್ವಜನಿಕರು ಸಣ್ಣಪುಟ್ಟ ಕೆಲಸಗಳಿಗೂ ಸರ್ಕಾರಿ ಕಚೇರಿಗಳಿಗೆ ಅಲೆಯುವುದನ್ನು ತಪ್ಪಿಸಲು ಈ ಏಕೀಕೃತ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಉತ್ತರಕನ್ನಡ ಜಿಲ್ಲೆಯ ಜನತೆಯ ಅಹವಾಲುಗಳನ್ನು ಆಲಿಸಿ, ಮನೆ ಬಾಗಿಲಿನಲ್ಲಿಯೇ ಸಮಸ್ಯೆಗಳಿಗೆ ಪರಿಹಾರ ನೀಡಲು ಸೆಪ್ಟಂಬರ್ ೫ ರಂದು ಅಂಕೋಲಾದ ಸ್ವಾತಂತ್ರ್ಯ ಸಂಗ್ರಾಮ ಭವನದಲ್ಲಿ ಆಯೋಜಿಸಿರುವ ತಾಲ್ಲೂಕು ಮಟ್ಟದ ಪ್ರಜಾಸೇವೆ ಆಂದೋಲನ ಸಭೆಯ ಯಶಸ್ಸಿಗೆ ಅಗತ್ಯವಿರುವ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><><>

ಅಸ್ಮಿತಾ ಖೇಲೋ ಇಂಡಿಯಾ ಅಡಿಯಲ್ಲಿ ಅಸ್ಮಿತಾ ರೋಡ್ ಸೈಕ್ಲಿಂಗ್ ಲೀಗ್ ವಿಜಯಪುರ ರಾಷ್ಟ್ರೀಯ ಹೆದ್ದಾರಿ ಭಾಗದಲ್ಲಿ ಇದೇ ೫ ರಿಂದ ೨ ದಿನಗಳ ಕಾಲ ನಡೆಯಲಿದೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರಾಜ್ಯ ಅಮೇಚೂರ್ ಸೈಕ್ಲಿಂಗ್ ಅಸೋಸಿಯೇಷನ್ ಅಧ್ಯಕ್ಷ ರಾಜು ಬಿರಾದಾರ್, ಭೂತನಾಳ ಕೆರೆ ಬಳಿ ಬರುವ ರಾಷ್ಟ್ರೀಯ ಹೆದ್ದಾರಿಯಲ್ಲಿ ಸೈಕ್ಲಿಂಗ್ ನಡೆಸಲು ತೀರ್ಮಾನಿಸಲಾಗಿದೆ. ಝಿರೋ ಟ್ರಾಫಿಕ್ ವ್ಯವಸ್ಥೆಗೆ ಈಗಾಗಲೇ ಮನವಿ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ೧೦ ಕಿಲೋಮೀಟರ್ ಟೈಂ ಟ್ರಯಲ್ ಸೇರಿದಂತೆ ವಿವಿಧ ಹಂತದಲ್ಲಿ ಸೈಕ್ಲಿಂಗ್ ನಡೆಯಲಿದ್ದು ಮಹಿಳಾ ಸ್ಪರ್ಧಿಗಳಿಗೆ ಮಾತ್ರ ಈ ಸ್ಪರ್ಧೆ ಸೀಮಿತಗೊಂಡಿದೆ, ಈ ಸ್ಪರ್ಧೆಯಲ್ಲಿ ಆಯ್ಕೆಯಾಗುವ ಕ್ರೀಡಾಪಟುಗಳು ದಕ್ಷಿಣ ಭಾರತ ವಲಯಕ್ಕೆ ಆಯ್ಕೆಯಾಗಲಿದ್ದಾರೆ.

<><><><>

ಇಂದು ವಿಶ್ವ ತೆಂಗಿನಕಾಯಿ ದಿನ ಆಚರಿಸಲಾಗುತ್ತಿದೆ. ತೆಂಗಿನಕಾಯಿಯ ವೈವಿಧ್ಯಮಯ ಬಳಕೆ ಹಾಗೂ ಆರೋಗ್ಯ ರಕ್ಷಣೆಯಲ್ಲಿ ಇದರ ಕೊಡುಗೆ ಪರಿಗಣಿಸಿ, ಪ್ರತಿ ವರ್ಷ ಸೆಪ್ಟೆಂಬರ್ ೨ ರಂದು ಈ ದಿನ ಆಚರಿಸಲಾಗುತ್ತದೆ. ಭಾರತ, ತೆಂಗಿನಕಾಯಿ ಉತ್ಪಾದನೆಯಲ್ಲಿ ಜಾಗತಿಕವಾಗಿ ಪ್ರಥಮ ಸ್ಥಾನದಲ್ಲಿದ್ದು, ತೆಂಗಿನ ಸಸಿ ಬೆಳೆಯುವುದರಲ್ಲಿ ತೃತೀಯ ಸ್ಥಾನದಲ್ಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>